# ಕರ್ನೂಲು ಬಸ್ ದುರಂತ: ಬೆಂಕಿಯಲ್ಲಿ 20ಕ್ಕೂ ಹೆಚ್ಚು ಪ್ರಯಾಣಿಕರ ದುರ್ಮರಣ



**ಆಂಧ್ರಪ್ರದೇಶ:** ಕರ್ನೂಲು ಜಿಲ್ಲೆಯ ಚಿನ್ನತೇಕೂರು ಗ್ರಾಮದ ಬಳಿ ಇಂದು ಮುಂಜಾನೆ ಸಂಭವಿಸಿದ ಭೀಕರ ಬಸ್ ದುರಂತವು ದೇಶವನ್ನೇ ಕಂಗೊಳಿಸಿದೆ. ಬೆಳಗಿನ ಸುಮಾರು 3 ಗಂಟೆ ಸುಮಾರಿಗೆ ಹೈದರಾಬಾದ್‌ನಿಂದ ಬೆಂಗಳೂರಿನತ್ತ ಹೊರಟಿದ್ದ ಕಾವೇರಿ ಟ್ರಾವೆಲ್ಸ್‌ನ ಖಾಸಗಿ ಸ್ಲೀಪರ್ ಬಸ್ ಭಯಾನಕ ಅಗ್ನಿ ಅವಘಡಕ್ಕೆ ಒಳಗಾದ ಪರಿಣಾಮ 20ಕ್ಕೂ ಹೆಚ್ಚು ಪ್ರಯಾಣಿಕರು ಜೀವಂತವಾಗಿ ಸುಟ್ಟು ಕರಕಲಾಗಿ ಸಾವಿಗೀಡಾದರು. ಮತ್ತೊಂದು 18 ಮಂದಿ ತೀವ್ರವಾಗಿ ಗಾಯಗೊಂಡು ಕರ್ನೂಲು ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಪ್ರಾಥಮಿಕ ಮಾಹಿತಿಯ ಪ್ರಕಾರ, ಬಸ್ ಚಲಿಸುತ್ತಿದ್ದ ವೇಳೆ ವಿರುದ್ಧ ದಿಕ್ಕಿನಿಂದ ಬರುತ್ತಿದ್ದ ಬೈಕ್ ಒಂದು ಬಸ್‌ಗೆ ಬಲವಾದ ಡಿಕ್ಕಿ ಹೊಡೆದಿದ್ದು, ಆಘಾತದ ಪರಿಣಾಮ ಬೈಕ್‌ನ ಪೆಟ್ರೋಲ್ ಟ್ಯಾಂಕ್ ಸಿಡಿದು ಬೆಂಕಿ ಹೊತ್ತಿಕೊಂಡಿತು. ಕ್ಷಣಮಾತ್ರದಲ್ಲಿ ಬೆಂಕಿ ಬಸ್‌ನ ಮುಂಭಾಗಕ್ಕೆ ವ್ಯಾಪಿಸಿ, ಕೆಲವು ಸೆಕೆಂಡ್‌ಗಳಲ್ಲಿ ಸಂಪೂರ್ಣ ವಾಹನವನ್ನು ಆವರಿಸಿತು. ಚಾಲಕ ತಕ್ಷಣವೇ ಬೆಂಕಿ ಆರಿಸಲು ಯತ್ನಿಸಿದರೂ, ಪ್ರಯಾಣಿಕರಿಗೆ ಇಳಿಯಿರಿ ಎಂದು ಎಚ್ಚರಿಸಲು ಸಾಧ್ಯವಾಗಲಿಲ್ಲ. ಬೆಂಕಿಯ ಜ್ವಾಲೆ ಗಾಳಿಯೊಡನೆ ವೇಗವಾಗಿ ಹಬ್ಬಿ, ನಿದ್ರಾವಸ್ಥೆಯಲ್ಲಿದ್ದ ಪ್ರಯಾಣಿಕರು ಎಚ್ಚರಗೊಳ್ಳುವಷ್ಟರಲ್ಲಿ ಅಗ್ನಿ ಬಸ್‌ನೊಳಗೆ ಹರಡಿತ್ತು.

ಸ್ಥಳೀಯರು ಮತ್ತು ಅಗ್ನಿಶಾಮಕ ದಳದ ಸಿಬ್ಬಂದಿ ತಕ್ಷಣ ಸ್ಥಳಕ್ಕೆ ಧಾವಿಸಿದರೂ, ಬೆಂಕಿಯ ತೀವ್ರತೆ ಅಷ್ಟೇನೂ ಕಡಿಮೆಯಾಗಲಿಲ್ಲ. ಕೆಲವು ಪ್ರಯಾಣಿಕರು ಕಿಟಕಿಗಳನ್ನು ಒಡೆದು ಪ್ರಾಣಾಪಾಯದಿಂದ ಪಾರಾಗಲು ಪ್ರಯತ್ನಿಸಿದ್ದು, ಸುಮಾರು 18 ಮಂದಿ ಪಾರಾಗಿದ್ದಾರೆ. ಆದರೆ ಉಳಿದವರು ಒಳಗೆ ಸಿಕ್ಕಿಹಾಕಿಕೊಂಡು ಸುಟ್ಟು ಭಸ್ಮರಾಗಿದ್ದಾರೆ. ದುರಂತದ ದೃಶ್ಯಗಳು ಅತೀವ ಮನುಷ್ಯತೆಯ ಮೀರಿದಂತಿದ್ದವು. ಬಸ್ ಸಂಪೂರ್ಣವಾಗಿ ಸುಟ್ಟು ಕರಕಲಾದ್ದರಿಂದ ಮೃತರ ಗುರುತು ಗುರುತಿಸುವುದು ಅತಿ ಕಷ್ಟಕರವಾಗಿದೆ. ಈ ಹಿನ್ನೆಲೆಯಲ್ಲಿ ಫೊರೆನ್ಸಿಕ್ ತಂಡ ಸ್ಥಳಕ್ಕೆ ಬೇಟಿ ನೀಡಿ ಪರಿಶೀಲನೆ ಆರಂಭಿಸಿದೆ.

ಬಸ್‌ನಲ್ಲಿ ಇದ್ದ ಪ್ರಯಾಣಿಕರಲ್ಲಿ ಶ್ರೀಹರ್ಷ, ಶಿವ, ಸ್ಯಾಮ್, ಮೇಘಾನಂದ್, ಧಾತ್ರಿ, ರಾಮರೆಡ್ಡಿ, ಅಮೃತಕುಮಾರ್, ಚಂದನ, ಸೂರ್ಯ, ಉಮಾಪತಿ, ಪಂಕಜ್, ಹಾರಿಕಾ, ಕೀರ್ತಿ, ತರುಣ, ವೇಣುಗೋಪಾಲ್, ಆಕಾಶ್, ಮಹಮ್ಮದ್, ಜಯಂತ್, ಅಶ್ವಿನ್ ರೆಡ್ಡಿ, ಸತ್ಯ, ಸುಬ್ರಹ್ಮಣ್ಯ, ಪ್ರಶಾಂತ್, ಗುಣಸಾಯಿ, ಆರ್ಗ, ನವೀನ್ ಕುಮಾರ್, ರಮೇಶ್ ಮತ್ತು ವೇಣುಗುಂಡ ಸೇರಿದಂತೆ ಹಲವರ ಹೆಸರುಗಳು ಲಭ್ಯವಾಗಿವೆ. ಮೃತರ ಪಟ್ಟಿ ಇನ್ನೂ ಪೂರ್ಣವಾಗಿಲ್ಲ.

ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಅವರು ಈ ದುರ್ಘಟನೆಯ ಬಗ್ಗೆ ಆಘಾತ ವ್ಯಕ್ತಪಡಿಸಿ, ರಾಜ್ಯ ಸರ್ಕಾರದಿಂದ ಮೃತರ ಕುಟುಂಬಗಳಿಗೆ ತುರ್ತು ಸಹಾಯ ನೀಡುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ತಾತ್ಕಾಲಿಕವಾಗಿ ಪ್ರತಿ ಮೃತರಿಗೆ ₹2 ಲಕ್ಷ ಪರಿಹಾರ ಘೋಷಿಸಲಾಗಿದೆ. ತೆಲಂಗಾಣ ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿ ಅವರು ಕೂಡ ಘಟನೆಯ ಕುರಿತು ವಿಷಾದ ವ್ಯಕ್ತಪಡಿಸಿ, ಹೆಲ್ಪ್‌ಲೈನ್ ಸ್ಥಾಪಿಸಿ ಗಾಂಧಿನಗರ ಜಿಲ್ಲಾ ಅಧಿಕಾರಿಗಳಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ.

ಈ ನಡುವೆ ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಸಹ ತಮ್ಮ ಸಂತಾಪ ವ್ಯಕ್ತಪಡಿಸಿದ್ದಾರೆ. ಪ್ರಧಾನಿ ಮೋದಿ ಎಕ್ಸ್ (ಟ್ವಿಟ್ಟರ್) ಖಾತೆಯಲ್ಲಿ, "ಕರ್ನೂಲು ಬಸ್ ದುರಂತದಲ್ಲಿ ಅನೇಕ ಜೀವಗಳು ಕಳೆದುಹೋಗಿರುವುದು ಆಘಾತಕರ. ಗಾಯಾಳುಗಳು ಶೀಘ್ರ ಚೇತರಿಸಿಕೊಳ್ಳಲಿ ಎಂದು ಹೃತ್ಪೂರ್ವಕವಾಗಿ ಪ್ರಾರ್ಥಿಸುತ್ತೇನೆ" ಎಂದು ಬರೆದು ಸಂತಾಪ ಸೂಚಿಸಿದ್ದಾರೆ

ಸದ್ಯ ಘಟನಾ ಸ್ಥಳದಲ್ಲಿ ಪೊಲೀಸರು, ಅಗ್ನಿಶಾಮಕ ದಳ ಹಾಗೂ ಫೊರೆನ್ಸಿಕ್ ತಂಡಗಳು ಕಾರ್ಯನಿರ್ವಹಿಸುತ್ತಿದ್ದು, ಮೃತರ ಗುರುತು ಪತ್ತೆಹಚ್ಚುವ ಕೆಲಸ ಹಾಗೂ ಕಾರಣದ ನಿಖರ ತನಿಖೆ ಮುಂದುವರಿದಿದೆ. ಈ ಭೀಕರ ದುರಂತವು ಕೇವಲ ಆಂಧ್ರವನ್ನಷ್ಟೇ ಅಲ್ಲ, ದೇಶದಾದ್ಯಂತ ಆಘಾತ ಮತ್ತು ದುಃಖದ ಅಲೆ ಉಂಟುಮಾಡಿದೆ.

# ಗ್ಯಾಂಗ್ ರೇ*ಪ್ ಪ್ರಕರಣ: ಆರು ಆರೋಪಿಗಳ ಬಂಧನ

**ಬೆಂಗಳೂರು:**ಕೋಲ್ಕತ್ತಾದಿಂದ ಕೆಲಸದ ಹುಡುಕಾಟದಲ್ಲಿ ಬೆಂಗಳೂರಿಗೆ ಆಗಮಿಸಿದ್ದ ಮಹಿಳೆಯೊಬ್ಬರ ಮೇಲೆ ಏಳು ಜನ ದುಷ್ಕರ್ಮಿಗಳು ಸಾಮೂಹಿಕ ಅತ್ಯಾಚಾರವೆಸಗಿರುವ ಘಟನೆ ಬೆಂಗಳೂರು ಉತ್ತರ ತಾಲೂಕಿನ ಗಂಗೊಂಡನಹಳ್ಳಿಯಲ್ಲಿ ನಡೆದಿದೆ. ಈ ಗಟನೆಗೆ ಸಂಬಂಧಿಸಿದಂತೆ ಮಾದನಾಯಕನಹಳ್ಳಿ ಪೊಲೀಸರು ಆರು ಜನ ಆರೋಪಿಗಳನ್ನು ಬಂಧಿಸಿದ್ದು, ಮತ್ತೊಬ್ಬ ಆರೋಪಿಯ ಹುಡುಕಾಟ ನಡೆಯುತ್ತಿದೆ.

ಬಂಧಿತ ಆರೋಪಿಗಳನ್ನು ನವೀನ್, ಕಾರ್ತಿಕ್, ಶುಯೋಗ್, ಸೀನ್, ಜಂಗ್ಲಿ ಮತ್ತು ಪೃಥ್ವಿ ಎಂದು ಗುರುತಿಸಲಾಗಿದೆ. ಇವರೆಲ್ಲರೂ ಸ್ಥಳೀಯರಾಗಿದ್ದು, ಗಂಗೊಂಡನಹಳ್ಳಿಯ ಸಮೀಪದಲ್ಲಿ ಮನೆಗೆಲಸ ಮಾಡಿಕೊಂಡಿದ್ದವರು ಎಂದು ತಿಳಿದುಬಂದಿದೆ. ಏಳನೇ ಆರೋಪಿಯಾದ ಮಿಥುನ್ ತಲೆಮರೆಸಿಕೊಂಡಿದ್ದು, ಅವನಿಗಾಗಿ ಪೊಲೀಸರು ತೀವ್ರ ಶೋಧ ನಡೆಸುತ್ತಿದ್ದಾರೆ.

ಈ ಘಟನೆಯು ಬೆಂಗಳೂರು ಹೊರವಲಯದ ಗಂಗೊಂಡನಹಳ್ಳಿಯಲ್ಲಿ ನಡೆದಿದೆ. ಕೋಲ್ಕತ್ತಾ ಮೂಲದ ಮಹಿಳೆಯೊಬ್ಬರು ಇತ್ತೀಚೆಗೆ ಕೆಲಸದ ಹುಡುಕಾಟದಲ್ಲಿ ಬೆಂಗಳೂರಿಗೆ ಆಗಮಿಸಿದ್ದರು. ಆರೋಪಿಗಳು ಪೀಣ್ಯ ಪೊಲೀಸ್ ಠಾಣೆಯ ಇನ್‌ಫಾರ್ಮರ್‌ಗಳಂತೆ ತೋರಿಕೊಂಡು, ಮಹಿಳೆಯ ಮನೆಗೆ ಕಂಠಪೂರ್ತಿ ಕುಡಿದ ಸ್ಥಿತಿಯಲ್ಲಿ ನುಗ್ಗಿದ್ದಾರೆ. ನಿಮ್ಮ ಮನೆಯಲ್ಲಿ ಡ್ರಗ್ಸ್ ಇದೆ, ಕೊಡಿ ಎಂದು ಆರೋಪಿಸಿ, ಮನೆಯೊಳಗೆ ಬಲವಂತವಾಗಿ ಪ್ರವೇಶಿಸಿದ್ದಾರೆ.

ಆರೋಪಿಗಳು ಮಹಿಳೆಯ ಮೊಬೈಲ್ ಫೋನ್ ಮತ್ತು 50 ಸಾವಿರ ರೂಪಾಯಿ ನಗದನ್ನು ಕಸಿದುಕೊಂಡಿದ್ದಾರೆ. ಇದೇ ವೇಳೆ, ಮನೆಯಲ್ಲಿದ್ದ ಒಬ್ಬ ಪುರುಷನನ್ನು ಬ್ಯಾಟ್‌ನಿಂದ ಥಳಿಸಿ ಕಟ್ಟಿಹಾಕಿದ್ದಾರೆ. ಬಳಿಕ, ಮಹಿಳೆಯನ್ನು ಎಳೆದೊಯ್ದು, ಸಮೀಪದ ಮನೆಯೊಂದಕ್ಕೆ ಕರೆದೊಯ್ದು, ಸಾಮೂಹಿಕ ಅತ್ಯಾಚಾರವೆಸಗಿದ್ದಾರೆ.

ಇದಕ್ಕೆ ಸಂಬಂದಿಸಿದಂತೆ ಮಾದನಾಯಕನಹಳ್ಳಿ ಪೊಲೀಸರು ಸ್ಥಳೀಯರಿಂದ ಮಾಹಿತಿ ಪಡೆದು, ಆರೋಪಿಗಳನ್ನು ಗುರುತಿಸಿ ಬಂಧಿಸಲಾಗಿದೆ. ಆರೋಪಿಗಳ ವಿರುದ್ಧ ಭಾರತೀಯ ದಂಡ ಸಂಹಿತೆಯ ಸೆಕ್ಷನ್ 376D , 395 , ಮತ್ತು 323 ಅಡಿಯಲ್ಲಿ ಪ್ರಕರಣ ದಾಖಲಾಗಿದೆ. ಪೊಲೀಸರು ಸಿಸಿಟಿವಿ ದೃಶ್ಯಾವಳಿಗಳನ್ನು ಮತ್ತು ಸಾಕ್ಷಿಗಳ ಹೇಳಿಕೆಗಳನ್ನು ಆಧರಿಸಿ ತನಿಖೆಯನ್ನು ಮುಂದುವರೆಸಿದ್ದಾರೆ.

# 18.8 ಟನ್ ಸ್ವೀಟ್ ಮಾರಾಟ ಮಾಡಿ ದಾಖಲೆ ಬರೆದ ಕೆಎಂಎಫ್

ಈ ದಿನಗಳಲ್ಲಿ 18.8 ಟನ್ ಸ್ವೀಟ್ ಮಾರಾಟ ಮಾಡುವ ಮೂಲಕ ಧಾರವಾಡದ ಕೆಎಂಎಫ್ ದಾಖಲೆ ಬರೆದಿದೆ ಧಾರವಾಡ-ಹುಬ್ಬಳ್ಳಿ ರಸ್ತೆಯಲ್ಲಿ ಬರುವ ಕೆಎಂಎಫ್, ಧಾರವಾಡ, ಗದಗ ಮತ್ತು ಉತ್ತರ ಕನ್ನಡ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ (ಧಾಮುಲ್) ಈ ಬಾರಿ ದೊಡ್ಡದೊಂದು ಮೈಲಿಗಲ್ಲು ಮುಟ್ಟಿದೆ. ಧಾರವಾಡ ಅಂದ ಕೂಡಲೇ ಧಾರವಾಡ ಪೇಡಾ ಅನ್ನೋ ಹೆಸರು ಕೂಡ ಜೊತೆಗೆ ಬಂದು ಬಿಡುತ್ತೆ. ಜಿಲ್ಲೆಯಲ್ಲಿ ಅದಾಗಲೇ ಹಲವು ಪ್ರತಿಷ್ಠಿತ ಪೇಡಾ ಕಂಪನಿಗಳು ಅಸ್ತಿತ್ವದಲ್ಲಿವೆ. ಹಲವಾರು ದಶಕಗಳಿಂದ ಅವು ಮಾರುಕಟ್ಟೆಯಲ್ಲಿ ತಮ್ಮದೇ ಬ್ರಾಂಡ್‌ನ ಸಿಹಿ ಉತ್ಪನ್ನಗಳನ್ನು ಮಾರಾಟ ಮಾಡುತ್ತಿವೆ.

ಇಂಥ ಪ್ರತಿಷ್ಠಿತ ಕಂಪನಿಗಳ ನಡುವೆಯೇ ಧಾಮುಲ್ ಮಹತ್ವದ ಸಾಧನೆ ಮಾಡಿದೆ. ಈ ಬಾರಿಯ ದಸರಾ ಹಬ್ಬದಿಂದ ಹಿಡಿದು ದೀಪಾವಳಿ ಕೊನೆಯ ದಿನದವರೆಗೆ ಧಾಮುಲ್ ಒಟ್ಟು 18.8 ಟನ್ ಸ್ವೀಟ್ ಮಾರಾಟ ಮಾಡಿ ದಾಖಲೆ ಸೃಷ್ಟಿಸಿದೆ. ಸುಮಾರು 20 ದಿನಗಳ ಅವಧಿಯಲ್ಲಿ ಇಷ್ಟೊಂದು ಸಿಹಿ ಉತ್ಪನ್ನಗಳನ್ನು ತಯಾರಿಸಿ, ಅದರ ಮಾರಾಟವನ್ನೂ ಮಾಡಿದೆ. ಆ ಮೂಲಕ ಸುಮಾರು 80 ಲಕ್ಷ ರೂ. ವಹಿವಾಟು ಮಾಡಿದೆ ಎಂದು ಧಾರವಾಡ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ಡಿ.ಟಿ. ಕಳಸ ಹೇಳಿದ್ದಾರೆ.

18 ಟನ್ ಸಿಹಿಯಲ್ಲಿ ಹುಬ್ಬಳ್ಳಿ ಹಾಗೂ ಬೆಂಗಳೂರಿನ ಡಿಪೋಗೆ 8432 ಕೆ.ಜಿ. ಪೂರೈಕೆ ಮಾಡಲಾಗಿದೆ. ಇನ್ನು ಒಕ್ಕೂಟದ ಮೂರು ಜಿಲ್ಲೆಗಳಲ್ಲಿ 9795 ಕೆಜಿ ಸ್ವೀಟ್ ಮಾರಾಟ ಮಾಡಲಾಗಿದೆ. ಹಾಗೆ ನೋಡಿದರೆ ಒಕ್ಕೂಟದ ಅಧಿಕಾರಿಗಳಿಗೆ ಇಷ್ಟೊಂದು ಪ್ರಮಾಣದ ಪೂರೈಕೆಗೆ ಬೇಡಿಕೆ ಬರುತ್ತೆ ಅಂದುಕೊಂಡಿರಲಿಲ್ಲ. ಈ ದಿನಗಳಲ್ಲಿ ಒಕ್ಕೂಟದ ಗುರಿ 15 ಟನ್ ಆಗಿತ್ತು. ಆದರೆ ದಿನದಿಂದ ದಿನಕ್ಕೆ ಬೇಡಿಕೆ ಹೆಚ್ಚಾಗಿದ್ದಕ್ಕೆ ಹಗಲು-ರಾತ್ರಿ ಎನ್ನದೇ ಬಗೆ ಬಗೆಯ ಸ್ವೀಟ್‌ಗಳನ್ನು ಉತ್ಪಾದಿಸಲಾಗಿದೆ. ಆ ಮೂಲಕ ಸುಮಾರು 18.8 ಟನ್ ಉತ್ಪಾದನೆಯ ಮಾರಾಟವಾಗಿದೆ.

ಧಾರವಾಡದ ಈ ಡೈರಿಯಲ್ಲಿ ಧಾರವಾಡ ಪೇಡಾ, ಬಿಳಿ ಪೇಡಾ, ಮೈಸೂರು ಪಾಕ್, ಹೆಸರಿನ ಉಂಡೆ ಸೇರಿದಂತೆ ವಿವಿಧ ಉತ್ಪನ್ನಗಳನ್ನು ತಯಾರಿಸಲಾಗುತ್ತೆ. ಇಲ್ಲಿ ತಯಾರಾಗುವ ಉತ್ಪನ್ನಗಳಿಗೆ ಭಾರೀ ಬೇಡಿಕೆ ಇದೆ. ಅದರಲ್ಲೂ ಖಾಸಗಿ ಪ್ರತಿಷ್ಠಿತ ಕಂಪನಿಗಳು ಮಾರಾಟದಲ್ಲಿ ಮುಂಚೂಣಿಯಲ್ಲಿರೋವಾಗ, ಅಂಥ ಸ್ಪರ್ಧೆ ನಡುವೆಯೇ ಈ ಗುರಿ ಸಾಧಿಸಿದ್ದು ಅಚ್ಚರಿ ಮೂಡಿಸುವಂತಾಗಿದೆ.


ಇತ್ತೀಚಿನ ದಿನಗಳಲ್ಲಿ ಹಾಲಿನ ಸಂಗ್ರಹದಲ್ಲಿಯೂ ಒಕ್ಕೂಟ ದೊಡ್ಡ ಸಾಧನೆ ಮಾಡಿತ್ತು. ಮೂರೂ ಜಿಲ್ಲೆಗಳಿಂದ ದಿನವಹಿ ಸರಾಸರಿ 1,60,391 ಕೆಜಿ ಹಾಲು ಶೇಖರಣೆಯಾಗುತ್ತಿತ್ತು. ಆದರೆ ಈ ವರ್ಷದ ಸೆಪ್ಟೆಂಬರ್ ತಿಂಗಳಲ್ಲಿ ಒಟ್ಟು 2,23,023 ಲೀಟರ್ ಹಾಲು ಶೇಖರಣೆಯಾಗಿತ್ತು. ಇಂಥ ಸಾಧನೆಯ ಜೊತೆಗೆ ಈ ಬಾರಿ ಎರಡೂ ಹಬ್ಬಗಳಲ್ಲಿ ಅತಿ ಹೆಚ್ಚು ಸಿಹಿ ಮಾರಾಟ ಮಾಡುವ ಮೂಲಕ ಒಕ್ಕೂಟ ಖಾಸಗಿ ಕಂಪನಿಗಳಿಗೂ ಸವಾಲೆಸೆದಿದೆ. ಈ ಸಾಧನೆ ಹೀಗೆಯೇ ಮುಂದುವರೆದರೆ ಇದು ಹೈನುಗಾರಿಕೆ ಮಾಡುವವರಿಗೆ ಉತ್ಸಾಹವನ್ನು ತರಲಿದೆ ಎನ್ನುವುದು ಸ್ಥಳೀಯರಾದ ಲಕ್ಷ್ಮಣ ಬಕಾಯಿ ಅವರ ಅಭಿಪ್ರಾಯ.

# ಆರು ತಿಂಗಳ ಶಿಶು ಅಪಹರಣ

**ಮೈಸೂರು:** ಆರು ತಿಂಗಳ ಶಿಶುವೊಂದರ ಅಪಹರಣ ಯತ್ನವನ್ನು ಮೈಸೂರು ರೈಲ್ವೆ ನಿಲ್ದಾಣದಲ್ಲಿ ಬುಧವಾರ ರೈಲ್ವೆ ರಕ್ಷಣಾ ಪಡೆ (RPF) ಸಿಬ್ಬಂದಿ ತಡೆದಿದ್ದಾರೆ. ಬೆಳಗ್ಗೆ 5.20ಕ್ಕೆ , ಮೈಸೂರು ರೈಲ್ವೆ ನಿಲ್ದಾಣದ ಪೋರ್ಟಿಕೊ ಪ್ರದೇಶದ ಬಳಿ ಮಹಿಳೆಯೊಬ್ಬರು ಅಳುತ್ತಿರುವುದನ್ನು ಕರ್ತವ್ಯದಲ್ಲಿದ್ದ ಆರ್‌ಪಿಎಫ್ ಕಾನ್‌ಸ್ಟೆಬಲ್ ಸಿಎಂ ನಾಗರಾಜು ಗಮನಿಸಿದ್ದಾರೆ. ವಿಚಾರಿಸಿದಾಗ, ಕಾಣೆಯಾದ ತನ್ನ ಮಗುವನ್ನು ಹುಡುಕುತ್ತಾ ಮಹಿಳೆ ಅಳುತ್ತಿರುವುದು ಗೊತ್ತಾಗಿದೆ. ಕುಟುಂಬವು ನಿಲ್ದಾಣದ ಆವರಣದಲ್ಲಿ ನಿದ್ರಿಸುತ್ತಿರುವಾಗ, ತನ್ನ ಆರು ತಿಂಗಳ ಮಗ ನಾಪತ್ತೆಯಾಗಿದೆ ಎಂದು ಮಹಿಳೆ ಕಾನ್‌ಸ್ಟೆಬಲ್‌ಗೆ ತಿಳಿಸಿದ್ದಾರೆ. ತಕ್ಷಣ ಕಾರ್ಯಪ್ರವೃತ್ತರಾದ ನಾಗರಾಜು, ಸಹಾಯಕ ಸಬ್-ಇನ್ಸ್‌ಪೆಕ್ಟರ್ ಪ್ರಸಿ ಮತ್ತು ಇನ್ಸ್‌ಪೆಕ್ಟರ್ ದಿನೇಶ್ ಕುಮಾರ್ ಅವರಿಗೆ ಮಾಹಿತಿ ನೀಡಿದ್ದಾರೆ. ನಂತರ, ತಕ್ಷಣವೇ ಆರ್‌ಪಿಎಫ್ ತಂಡವು ನಿಲ್ದಾಣದ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿದೆ. ಸುಮಾರು 50 ವರ್ಷ ವಯಸ್ಸಿನ ಮಹಿಳೆಯೊಬ್ಬರು ಶಿಶುವನ್ನು ಎತ್ತಿಕೊಂಡು ಪ್ಲಾಟ್‌ಫಾರ್ಮ್ ಸಂಖ್ಯೆ 6 ರ ಕಡೆಗೆ ನಡೆದುಕೊಂಡು ಹೋಗುತ್ತಿರುವುದು ಕಂಡುಬಂದಿದೆ. ಅಲ್ಲದೆ, ರೈಲು ಸಂಖ್ಯೆ 16206 ಅನ್ನು ಹತ್ತಲು ಪ್ರಯತ್ನಿಸುತ್ತಿರುವುದು ಕಾಣಿಸಿದೆ.

ಕೂಡಲೇ ಜಾಗೃತರಾದ ಆರ್‌ಪಿಎಫ್ ಸಿಬ್ಬಂದಿ ಪ್ಲಾಟ್‌ಫಾರ್ಮ್‌ಗೆ ಧಾವಿಸಿ, ಶಂಕಿತ ಮಹಿಳೆಯನ್ನು ತಡೆದು ಮಗುವನ್ನು ರಕ್ಷಿಸಿದ್ದಾರೆ. ನಂತರ ಮಹಿಳೆಯನ್ನು ವಿಚಾರಣೆಗಾಗಿ ಆರ್‌ಪಿಎಫ್ ಪೋಸ್ಟ್‌ಗೆ ಕರೆದೊಯ್ಯಲಾಗಿದೆ. ಪೋಷಕರಿಗೆ ತಕ್ಷಣವೇ ಮಾಹಿತಿ ನೀಡಿ, ಅವರ ಮಗುವನ್ನು ಮತ್ತೆ ಅವರ ಮಡಿಲು ಸೇರಿಸಲಾಯಿತು.

## ಮಳೆಗೆ ಕುಸಿದ ಮನೆ ಗೋಡೆ: ವೃದ್ಧೆ ಸಾವು



**ಹಾಸನ:** ನಿರಂತರ ಮಳೆಗೆ ಮನೆ ಗೋಡೆ ಕುಸಿದ ಪರಿಣಾಮ ವೃದ್ಧೆ ಮೃತಪಟ್ಟಿರುವ ಘಟನೆ ಹಾಸನ ಜಿಲ್ಲೆ ಅರಕಲಗೂಡು ತಾಲೂಕಿನ ಮತ್ತಿಗೋಡು ಗ್ರಾಮದಲ್ಲಿ ನಡೆದಿದೆ. ಜವರಮ್ಮ(63) ದುರ್ಮರಣ ಹೊಂದಿದವರಾಗಿದ್ದು, ಮನೆಯಲ್ಲಿ ಮಲಗಿದ್ದಾಗ ವೃದ್ಧೆ ಮೇಲೆ ಗೋಡೆ ಕುಸಿದಿದೆ.

ಈ ವೇಳೆ ಮೃತ ಜವರಮ್ಮನ ಮಗ ಕೋದಲೆಳೆ ಅಂತರದಲ್ಲಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಘಟನಾ ಸ್ಥಳಕ್ಕೆ ಸ್ಥಳೀಯ ಶಾಸಕ ಎ.ಮಂಜು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಮರಣೋತ್ತರ ಪರೀಕ್ಷೆಗಾಗಿ ಮಹಿಳೆಯ ಮೃತದೇಹವನ್ನ ಕೊಣನೂರು ಸಮುದಾಯ ಆರೋಗ್ಯ ಕೇಂದ್ರಕ್ಕೆ ರವಾನಿಸಲಾಗಿದೆ.

# ಪಟಾಕಿ ಶಬ್ದಕ್ಕೆ 100 ನಾಯಿಗಳು ನಾಪತ್ತೆ

**ಬೆಂಗಳೂರು:**ದೀಪಾವಳಿಯಂದು ಎಲ್ಲರಿಗೂ ಸಂಭ್ರಮ, ಏಕೆಂದರೆ ಪಟಾಕಿ ಸಿಡಿಸಿ)ಅ ಅದ್ದೂರಿಯಾಗಿ ಆಚರಣೆ ಮಾಡಲಾಗುತ್ತದೆ. ಆದರೆ ನಾಯಿಗಳಿಗೆ ಇದು ಭಯದ ದಿನವಾಗಿರುತ್ತದೆ, ಹೌದು ಏಕೆಂದರೆ ಪಟಾಕಿ ಶಬ್ದಕ್ಕೆ ಅವುಗಳು ಎಲ್ಲೋಲು ಓಡಿ ಹೋಗುತ್ತದೆ. ಪಟಾಕಿಯಿಂದ ತನ್ನ ಬೀದಿ ಬಿಟ್ಟು, ಹಸಿವು ತಡೆದುಕೊಂಡು ಯಾವುದೋ ಸುರಕ್ಷಿತ ಸ್ಥಳವನ್ನು ಹುಡುಕುತ್ತಾ ಹೋಗುತ್ತದೆ. ಇದೀಗ ಬೆಂಗಳೂರು ಬೀದಿ ನಾಯಿಗಳ ಪರಿಸ್ಥಿತಿ ಕೂಡ ಅದೇ ಆಗಿದೆ. ಬೆಂಗಳೂರಿನಲ್ಲಿ ಎರಡು ದಿನ ಪಟಾಕಿ ಸಿಡಿಸಿದ ಕಾರಣ ನಾಯಿಗಳು ತಮ್ಮ ಏರಿಯಾ ಬಿಟ್ಟು ಎಲ್ಲೂ ನಾಪತ್ತೆಯಾಗಿದೆ. ಯುನೈಟೆಡ್ ಫಾರ್ ಕಂಪ್ಯಾಷನ್ ಪ್ರತಿನಿಧಿಯ ಪ್ರಕಾರ ವಾಟ್ಸಾಪ್‌ನಲ್ಲಿ ಪ್ರಾಣಿ ಪ್ರಿಯರ ಸಮುದಾಯವಾದ ವಾಯ್ಸ್ ಫಾರ್ ಅವರ್ ವಾಯ್ಸ್‌ಲೆಸ್ ಮೂಲಕ ನಾಲ್ಕು ದಿನಗಳಲ್ಲಿ ಸುಮಾರು ನೂರು ನಾಯಿ ನಾಪತ್ತೆ ಪ್ರಕರಣಗಳು ವರದಿಯಾಗಿವೆ ಎಂದು ವರದಿ ಮಾಡಿದೆ.

ಶಬ್ದದಿಂದ ಬೀದಿ ನಾಯಿಗಳ ಭಯಗೊಂಡಿದೆ. ಈ ಬಗ್ಗೆ ನಾವು ಮನುಷ್ಯರು ಅರಿತುಕೊಳ್ಳಬೇಕು ಎಂದು ಯುನೈಟೆಡ್ ಫಾರ್ ಕಂಪ್ಯಾಷನ್ ಹೇಳಿದೆ. ನಾಯಿಗಳು ಪಟಾಕಿ ಶಬ್ದಕ್ಕೆ ಭಯಗೊಂಡು ತನ್ನ ಊರನ್ನು ಬಿಟ್ಟು ಬೇರೆ ಕಡೆ ಹೋಗುತ್ತದೆ, ಆಶ್ರಯಕ್ಕಾಗಿ ಬೀದಿ ಬೀದಿ ಅಲೆಮಾರಿಯಂತೆ ತಿರುಗಾಡುತ್ತದೆ. ಊಟ ಇಲ್ಲದೆ, ಬೇರೆ ನಾಯಿಗಳ ದಾಳಿಗೆ ಒಳಗಾಗುತ್ತದೆ ಎಂದು ಹೇಳಿದ್ದಾರೆ. ರಾಜಾಜಿನಗರದ ನಿವಾಸಿಯೊಬ್ಬರ ಗೋಲ್ಡನ್ ರಿಟ್ರೈವರ್ ನಾಯಿ ಕಣ್ಮರೆಯಾಗಿದೆ. ಸಂಭ್ರಮದ ನಡುವೆ ಇದೊಂದು ದುಃಖಕರ ವಿಚಾರ, ಆ ಶ್ವಾನಕ್ಕಾಗಿ ರಾತ್ರಿ, ಹಗಲು ಎನ್ನದೇ ಹುಡುಕುತ್ತಿದ್ದೇವೆ ಎಂದು ಅವರು ಹೇಳಿದ್ದಾರೆ.

ಇನ್ನು ಇಂತಹದೇ ಒಂದು ಘಟನೆ ಬನಶಂಕರಿಯಲ್ಲೂ ನಡೆದಿದೆ. ಅಲ್ಲಿಯೂ ಕೂಡ ಲ್ಯಾಬ್ರಡಾರ್ ಶ್ವಾನ ಕಳೆದು ಹೋಗಿತ್ತು. ಆದರೆ ಅದು ಮನೆ ಪಕ್ಕಾದ ಖಾಲಿ ಜಾಗದಲ್ಲಿ ಇತ್ತು ಎಂದು ಹೇಳಿದ್ದಾರೆ. ಇದೀಗ ಅದು ನಮ್ಮ ಕೈ ಸೇರಿದೆ ಎಂದು ನಿವಾಸಿಯೊಬ್ಬರು ಹೇಳಿದ್ದಾರೆ. ಈ ವರ್ಷದ ದೀಪಾವಳಿಯಂದು ನಾಯಿಗಳ ಮೇಲೆ ಪಟಾಕಿಯನ್ನು ಎಸೆದು ಕ್ರೌರ್ಯ ಮೆರೆದಿರುವ ಘಟನೆ ಕಡಿಮೆಯಾಗಿದೆ ಎಂದು ಯುನೈಟೆಡ್ ಫಾರ್ ಕಂಪ್ಯಾಷನ್ ಹೇಳಿದೆ.

# ದಿವ್ಯಾ ಸುರೇಶ್ ಕಾರು ಡಿಕ್ಕಿ: ಮಹಿಳೆಗೆ ಗಂಭೀರ ಗಾಯ



**ಬೆಂಗಳೂರು:** ಬಿಗ್ ಬಾಸ್ ಮಾಜಿ ಸ್ಪರ್ಧಿ ಹಾಗೂ ನಟಿ ದಿವ್ಯಾ ಸುರೇಶ್ ಕಾರು ಬೈಕ್‌ಗೆ ಡಿಕ್ಕಿಯಾದ ಪರಿಣಾಮ ಮಹಿಳೆಯೊಬ್ಬರು ಗಂಭಿರವಾಗಿ ಗಾಯಗೊಂಡಿದ್ದಾರೆ. ಈ ವೇಳೆ ನಟಿ ಕಾರು ನಿಲ್ಲಿಸದೇ ಅಲ್ಲಿಂದ ಪರಾರಿಯಾಗಿದ್ದಾರೆ ಎಂಬ ಆರೋಪ ಕೇಳಿಬಂದಿದೆ.

ಅ.4ರ ರಾತ್ರಿ 1:30ಕ್ಕೆ ಬ್ಯಾಟರಾಯನಪುರದ ಎಂ.ಎಂ.ರಸ್ತೆಯಲ್ಲಿ ಈ ಅಪಘಾತ ಸಂಭವಿಸಿದ್ದು, ತಡವಾಗಿ ಬೆಳಕಿಗೆ ಬಂದಿದೆ. ಈ ಸಂಬಂಧ ಅ.7 ರಂದು ಗಾಯಗೊಂಡ ಮಹಿಳೆಯ ಸಂಬಂಧಿ ಕಿರಣ್ ನಟಿ ವಿರುದ್ಧ ದೂರು ದಾಖಲಿಸಿದ್ದಾರೆ.

ಅ.4ರ ರಾತ್ರಿ 1:30ಕ್ಕೆ ಬ್ಯಾಟರಾಯನಪುರದ ಎಂ.ಎಂ.ರಸ್ತೆಯಲ್ಲಿ ಈ ಅಪಘಾತ ಸಂಭವಿಸಿದ್ದು, ತಡವಾಗಿ ಬೆಳಕಿಗೆ ಬಂದಿದೆ. ಈ ಸಂಬಂಧ ಅ.7 ರಂದು ಗಾಯಗೊಂಡ ಮಹಿಳೆಯ ಸಂಬಂಧಿ ಕಿರಣ್ ನಟಿ ವಿರುದ್ಧ ದೂರು ದಾಖಲಿಸಿದ್ದಾರೆ.

ಸಿಸಿಟಿವಿ ಮೂಲಕ ಕಾರಿನ ನಂಬರ್ ಟ್ರೇಸ್ ಮಾಡಿದ್ದ ಬ್ಯಾಟರಾಯನಪುರ ಸಂಚಾರಿ ಪೊಲೀಸರು ದಿವ್ಯಾ ಸುರೇಶ್‌ರನ್ನು ಕರೆಸಿ, ಕಾರನ್ನು ಸೀಜ್ ಮಾಡಿದ್ದರು. ಆದರೆ ರಾತ್ರೋ ರಾತ್ರಿ ನಟಿ ಕಾರನ್ನು ಬಿಡಿಸಿಕೊಂಡು ಹೋಗಿದ್ದಾರೆ ಎಂದು ಅವರು ಆರೋಪಿಸಿದ್ದಾರೆ.

ಅನಿತಾಗೆ ಆಪರೇಷನ್‌ಗೆ ಎರಡು ಲಕ್ಷ ರೂ. ಹಣ ಖರ್ಚಾಗಿದೆ. ನಾನು ಕ್ಯಾಬ್ ಓಡಿಸಿ ಜೀವನ ಮಾಡುತ್ತಿದ್ದೇನೆ. ಇದುವರೆಗೂ ಸಂತ್ರಸ್ಥ ಮಹಿಳೆಯನ್ನು ನಟಿ ದಿವ್ಯಾ ಸುರೇಶ್ ಸಂಪರ್ಕಿಸಿಲ್ಲ. ದಯವಿಟ್ಟು ನಮಗೆ ಪರಿಹಾರ ಕೊಡಿಸಿ ಎಂದು ಕಿರಣ್ ಮನವಿ ಮಾಡಿದ್ದಾರೆ

# ಗಾಯಕಿ ವಾರಿಜಶ್ರೀ ಜೊತೆ ರಘು ದೀಕ್ಷಿತ್ ಮದುವೆ



ಖ್ಯಾತ ಗಾಯಕ, ಸಂಗೀತ ನಿರ್ದೇಶಕ ರಘು ದೀಕ್ಷಿತ್ ಅವರು 2ನೇ ಮದುವೆ ಆಗಿದ್ದಾರೆ. ಗಾಯಕಿ ವಾರಿಜಶ್ರೀ ವೇಣುಗೋಪಾಲ್ ಜೊತೆ ಅವರು ವೈವಾಹಿಕ ಜೀವನ ಆರಂಭಿಸಿದ್ದಾರೆ. ರಘು ದೀಕ್ಷಿತ್ ಮತ್ತು ವಾರಿಜಶ್ರೀ ಮದುವೆ ಆಗಲಿದ್ದಾರೆ ಎಂಬ ಬಗ್ಗೆ ಇತ್ತೀಚೆಗಷ್ಟೇ ಸುದ್ದಿ ಹೊರಬಿದ್ದಿತ್ತು. ಆ ಬಗ್ಗೆ ಮಾಧ್ಯಮವೊಂದಕ್ಕೆ ರಘು ದೀಕ್ಷಿತ್ ಅವರು ಪ್ರತಿಕ್ರಿಯೆ ಕೂಡ ನೀಡಿದ್ದರು. ಕುಟುಂಬದವರು ಮತ್ತು ಆಪ್ತರ ಸಮ್ಮುಖದಲ್ಲಿ ಈ ಮದುವೆ ನಡೆದಿದೆ. ಸೋಶಿಯಲ್ ಮೀಡಿಯಾದಲ್ಲಿ ಕೆಲವು ಫೋಟೋಗಳನ್ನು ಹಂಚಿಕೊಂಡು ಈ ಜೋಡಿಗೆ ಅಭಿನಂದನೆ ತಿಳಿಸಲಾಗಿದೆ.

ರಘು ದೀಕ್ಷಿತ್ ಮತ್ತು ವಾರಿಜಶ್ರೀ ವೇಣುಗೋಪಾಲ್ ಅವರು ಸಂಗೀತ ಕ್ಷೇತ್ರದಲ್ಲಿ ಗುರುತಿಸಿಕೊಂಡಿದ್ದಾರೆ. ಇಬ್ಬರಿಗೂ ಬೇಡಿಕೆ ಇದೆ. ಗಾಯಕಿಯಾಗಿ, ಕೊಳಲು ವಾದಕಿಯಾಗಿ ವಾರಿಜಶ್ರೀ ಅವರು ಖ್ಯಾತಿ ಗಳಿಸಿದ್ದಾರೆ. ಇಬ್ಬರು ಜೊತೆಯಾಗಿ ಕೆಲಸ ಮಾಡಿದ್ದಾರೆ. ಪರಿಚಯದಿಂದ ಪ್ರೀತಿ ಬೆಳೆದು, ಕುಟುಂಬದ ಒಪ್ಪಿಗೆ ಪಡೆದು ಅವರಿಬ್ಬರು ದಾಂಪತ್ಯ ಜೀವನ ಆರಂಭಿಸಿದ್ದಾರೆ. ಕುಟುಂಬದವರು ಹಾಗೂ ಆಪ್ತ ಸ್ನೇಹಿತರು ರಘು ದೀಕ್ಷಿತ್-ವಾರಿಜಶ್ರೀ ವಿವಾಹಕ್ಕೆ ಸಾಕ್ಷಿ ಆಗಿದ್ದಾರೆ. ಯಮುನಾ ಶ್ರೀನಿಧಿ, ಅಯ್ಯೋ ಶ್ರದ್ಧಾ ಸೇರಿದಂತೆ ಹಲವರು ಈ ಮದುವೆಯಲ್ಲಿ ಭಾಗಿಯಾಗಿದ್ದಾರೆ. ರಘು ದೀಕ್ಷಿತ್ ಮದುವೆಯ ಫೋಟೋಗಳು ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿವೆ. ಫೋಟೋ ನೋಡಿದ ಅಭಿಮಾನಿಗಳು ಕಮೆಂಟ್ ಮೂಲಕ ಅಭಿನಂದನೆ ತಿಳಿಸಿದ್ದಾರೆ.

# ಅಕ್ರಮ ಸಂಬಂಧದಲ್ಲಿ ಬೆಂಗಳೂರು ಫಸ್ಟ್

ಭಾರತೀಯರು ಪ್ರತಿಯೊಂದು ಸಂಬಂಧಕ್ಕೂ ಹೆಚ್ಚು ಮಹತ್ವ ನೀಡುತ್ತಾರೆ. ಆದರೆ ಈಗಿನ ಯುವಪೀಳಿಗೆಯೂ ಆಧುನಿಕತೆಗೆ ಒಗ್ಗಿಕೊಳ್ಳುತ್ತಿದ್ದಂತೆ ಸಂಬಂಧಗಳಿಗೆ ಬೆಲೆ ನೀಡುತ್ತಿಲ್ಲ. ಹೀಗಾಗಿ ಇತ್ತೀಚೆಗಿನ ದಿನಗಳಲ್ಲಿ ಅಕ್ರಮ ಸಂಬಂಧ, ದಾಂಪತ್ಯದಲ್ಲಿ ಬಿರುಕು ಹಾಗೂ ಅನ್ಯೋನ್ಯತೆಯ ಕೊರತೆ ಹೆಚ್ಚುತ್ತಲೇ ಇದೆ. ಆದರೆ ಇದೀಗ ಗ್ಲೀಡನ್ (Gleed-en) ಬಹಿರಂಗ ಪಡಿಸಿರುವ ಅಧ್ಯಯನದ ವರದಿಯಲ್ಲಿ ಬೆಂಗಳೂರು ಅತೀ ಹೆಚ್ಚು ಅಕ್ರಮ ಸಂಬಂಧ ಹೊಂದಿರುವ ನಗರ ಎನ್ನುವ ಆಘಾತಕಾರಿ ಅಂಶವು ಹೊರಬಿದ್ದಿದೆ.

**ಅತೀ ಹೆಚ್ಚು ಅಕ್ರಮ ಸಂಬಂಧ ಹೊಂದಿರುವ ಟಾಪ್ 5 ನಗರಗಳಿವು**

ಗ್ಲೀಡನ್ ಭಾರತದಲ್ಲಿ ಅತೀ ಹೆಚ್ಚು ಅಕ್ರಮ ಸಂಬಂಧ ಹಾಗೂ ದಾಂಪತ್ಯ ದ್ರೋಹ ಹೊಂದಿರುವ ಟಾಪ್ ಐದು ನಗರಗಳ ಪಟ್ಟಿಯನ್ನು ಪ್ರಕಟಿಸಿದೆ. ಈ ಸಾಲಿನಲ್ಲಿ ಮೊದಲ ಸ್ಥಾನವನ್ನು ಬೆಂಗಳೂರು ಪಡೆದುಕೊಂಡರೆ, ಉಳಿದ ನಾಲ್ಕು ಸ್ಥಾನಗಳನ್ನು ಕ್ರಮವಾಗಿ ಮುಂಬೈ, ಕೋಲ್ಕತಾ, ದೆಹಲಿ ಹಾಗೂ ಪುಣೆ ಪಡೆದುಕೊಂಡಿವೆ.

ದಾಂಪತ್ಯ ದ್ರೋಹ, ಅಕ್ರಮ ಸಂಬಂಧ ಹೆಚ್ಚಾಗಲು ಭಾವನಾತ್ಮಕ ಅತೃಪ್ತಿ, ವೈಯಕ್ತಿಕ ಅಗತ್ಯಗಳನ್ನು ಪೂರೈಕೆಯ ಕೊರತೆ, ದೈಹಿಕ ಹಾಗೂ ಮಾನಸಿಕ ಅನ್ಯೋನ್ಯತೆಯ ಕೊರತೆ, ವಿವಾಹೇತರ ಅಪ್ಲಿಕೇಶನ್‌ಗಳ ಬಳಕೆಯೇ ಕಾರಣ ಎಂದು ವಿವಾಹ ವಿಚ್ಛೇದನ ಪ್ರಕರಣಗಳನ್ನು ನಿರ್ವಹಿಸುವ ವಕೀಲರು ಹಾಗೂ ಸಂಬಂಧ ತಜ್ಞರು ತಿಳಿಸಿದ್ದಾರೆ.

ಗ್ಲೀಡನ್‌ನ ಭಾರತದ ವ್ಯವಸ್ಥಾಪಕಿ ಸಿಬಿಲ್ ಶಿಡೆಲ್ ಅವರು, ಭಾರತದಲ್ಲಿ 30 ಲಕ್ಷ ಜನರರು ಈ ವಿವಾಹೇತರು ಆ್ಯಪ್ ಗ್ಲೀಡನ್ ಬಳಸುತ್ತಿದ್ದಾರೆ. ಅದರಲ್ಲಿ ಶೇ. 17 ರಷ್ಟು ಮಂದಿ ಬೆಂಗಳೂರಿನವರೇ ಆಗಿದ್ದಾರೆ. ಇವರಲ್ಲಿ ಹೆಚ್ಚಿನವರು 30 ರಿಂದ 45 ವರ್ಷ ವಯಸ್ಸಿನ ವೃತ್ತಿಪರರೇ ಆಗಿದ್ದಾರೆ. ಈ ಆ್ಯಪ್‌ನ ಬಳಸುವವರಲ್ಲಿ ಶೇ. 65 ರಷ್ಟು ಪುರುಷರಿದ್ದಾರೆ. ಶೇಕಡಾ 35 ರಷ್ಟು ಮಹಿಳೆಯರು ಈ ಆ್ಯಪ್ ಬಳಸುತ್ತಿದ್ದಾರೆ, ಇನ್ನು ಆ್ಯಪ್ ಬಳಸುವವರು ಹೆಚ್ಚಾಗಿ ಹಣಕಾಸು, ಕಾನೂನು, ಎಂಜಿನಿಯರಿಂಗ್ ಮತ್ತು ಉದ್ಯಮಶೀಲತೆಯಂತಹ ಹಿನ್ನಲೆಯಲ್ಲಿ ಬಂದವರು ಈ ಅಧ್ಯಯನದ ವರದಿಯ ಬಳಿಕ ದೈಹಿಕ ಸಂಪರ್ಕಕ್ಕಿಂತ ಹೆಚ್ಚಾಗಿ ಭಾವನಾತ್ಮಕ ಬೆಂಬಲವನ್ನು ಹುಡುಕುವ ಸಲುವಾಗಿಯೇ ಈ ಆ್ಯಪ್ ಬಳಕೆ ಹೆಚ್ಚಾಗುತ್ತಿದೆ ಎಂದು ಹೇಳಿದ್ದಾರೆ.

# ಭೀಕರ ರಸ್ತೆ ಅಪಘಾತ: ಓರ್ವ ಸಾವು



ಮಂಡ್ಯ: ಜಿಲ್ಲೆಯ ಮದ್ದೂರು ತಾಲೂಕಿನ ಮಾಚಹಳ್ಳಿ ಸಮೀಪ ಶನಿವಾರ ಸರ್ಕಾರಿ ಬಸ್ ಮತ್ತು ಕಾರು ನಡುವೆ ಭೀಕರ ಅಪಘಾತ ಸಂಭವಿಸಿದೆ. ಈ ಅಪಘಾತದಲ್ಲಿ ಒಬ್ಬ ವ್ಯಕ್ತಿ ಸಾವನ್ನಪ್ಪಿದ್ದು, 15ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಚನ್ನಪಟ್ಟಣ ತಾಲೂಕಿನ ಪ್ರಸಿದ್ಧ ಯಾತ್ರಾ ಸ್ಥಳವಾದ ಶ್ರೀ ಚಾಮುಂಡೇಶ್ವರಿ ದೇವಾಲಯದಿಂದ ನೂರಕ್ಕೂ ಹೆಚ್ಚು ಭಕ್ತರನ್ನು ಹೊತ್ತು ಮದ್ದೂರು ನಗರದ ಕಡೆಗೆ ಬರುತ್ತಿದ್ದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ (ಕೆಎಸ್‌ಆರ್‌ಟಿಸಿ) ಬಸ್, ಮಾಚಹಳ್ಳಿ ಸಮೀಪಕ್ಕೆ ತಲುಪುವ ವೇಳೆಗೆ ಈ ದುರಂತ ಸಂಭವಿಸಿದೆ. ಮದ್ದೂರಿನಿಂದ ತುಮಕೂರು ಕಡೆಗೆ ತೆರಳುತ್ತಿದ್ದ ಕಾರೊಂದಕ್ಕೆ ಬಸ್‌ನ ಚಾಲಕನ ನಿಯಂತ್ರಣ ತಪ್ಪಿ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಕಾರಿನ ಚಾಲಕ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಕಾರಿನಲ್ಲಿದ್ದ ಮತ್ತೊಬ್ಬ ಮಹಿಳೆ ಗಂಭೀರವಾಗಿ ಗಾಯಗೊಂಡು, ಮಂಡ್ಯದ ಮಿಮ್ಸ್ ಆಸ್ಪತ್ರೆಗೆ ಚಿಕಿತ್ಸೆಗಾಗಿ ರವಾನಿಸಲಾಗಿದೆ. ಅಪಘಾತದಲ್ಲಿ ಸಾರಿಗೆ ಬಸ್‌ನಲ್ಲಿದ್ದ 15ಕ್ಕೂ ಹೆಚ್ಚು ಪ್ರಯಾಣಿಕರು ಗಾಯಗೊಂಡಿದ್ದು, ಅವರನ್ನು ಮದ್ದೂರು ತಾಲೂಕು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಗಾಯಾಳುಗಳಲ್ಲಿ ಕೆಲವರ ಸ್ಥಿತಿ ಚಿಂತಾಜನಕವಾಗಿದೆ.

ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.